ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 07ನೇ ಫೆಬ್ರವರಿ, 2013
(ಸಮಯ: ಬೆಳಗ್ಗೆ 10.00 ಗಂಟೆಗೆ)

---

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2013ರ ಫೆಬ್ರವರಿ 4ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಶ್ರೀ ವೀರಣ್ಣ ಚರಂತಿಮಠ ಅವರು 2013ರ ಫೆಬ್ರವರಿ 4ರಂದು ಸೂಚಿಸಿದ ಪ್ರಸ್ತಾಪದ ಮೇಲೆ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಎಸ್. ಪುಟ್ಟರಾಜು, ಹೆಚ್. ಎಸ್. ಪ್ರಕಾಶ, ವೆಂಕಟರಾವ್ ನಾಡಗೌಡ ಮತ್ತು ಸುನೀಲ್ ವಿ. ಹೆಗಡೆ ಅವರುಗಳು ಹಾಸನ ಜಿಲ್ಲೆಯ ಹೇಮಾವತಿ ಕೊಳ್ಳ ಪ್ರದೇಶದ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು ಹೊನ್ನಾವಳ್ಳಿ ಏತ ನೀರಾವರಿ ಯೋಜನೆಯ ಮೂಲಕ ಹೊಸದುರ್ಗ ತಾಲ್ಲೂಕಿನ ಬಲ್ಲಾಳ ಸಮುದ್ರ ಕೆರೆಗೆ ನೀರನ್ನು ಹರಿಸುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಸೈಯದ್ ಯಾಸಿನ್ ಅವರು ಓಪೆಕ್ ನೆರವಿನ ರಾಯಚೂರಿನ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅನುದಾನ ಬಿಡುಗಡೆಯಾಗಿದ್ದರೂ, ಇದುವರೆವಿಗೂ ಕಾರ್ಯಾರಂಭವಾಗದಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ..

4. ಶ್ರೀ ಗೂಳಿಹಟ್ಟಿ ಡಿ.ಶೇಖರ್ ಅವರು ರಾಜ್ಯದಲ್ಲಿ ಸಮರ್ಪಕವಾಗಿ ವಿದ್ಯುತ್ ಸರಬರಾಜು ಆಗದಿರುವ ಕಾರಣ ಉಂಟಾಗುತ್ತಿರುವ ತೊಂದರೆ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5. ಶ್ರೀ ನೆ.ಲ ನರೇಂದ್ರಬಾಬು ಅವರು ರಾಜ್ಯದಲ್ಲಿ ಅಕ್ಕಿ ಮತ್ತು ರಾಗಿ ಬೆಲೆ ಗಗನಕ್ಕೆ ಏರುತ್ತಿರುವುದರಿಂದ ಸಾಮಾನ್ಯ ಜನರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯುವುದು.

6. ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ ಅವರು ರಾಜ್ಯದಲ್ಲಿ ಸರ್ಕಾರಿ ಗ್ರಂಥಾಲಯಗಳಲ್ಲಿ ಗೌರವ ಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಗ್ರಂಥಪಾಲಕರನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಸಾರ್ವಜನಿಕ ಗ್ರಂಥಾಲಯ,ಸಣ್ಣ ಉಳಿತಾಯ ಹಾಗೂ ಲಾಟರಿ, ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರಾದ ಎನ್.ಹೆಚ್.ಶಿವಶಂಕರರೆಡ್ಡಿ, ಎನ್.ಸಂಪಂಗಿ ಮತ್ತು ಕೆ. ವೆಂಕಟಸ್ವಾಮಿ ಅವರುಗಳು ಕರ್ನಾಟಕ ರಾಜ್ಯದ ಕೆಲವು ಬರಪೀಡಿತ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಎತ್ತಿನಹೊಳೆ ಯೋಜನೆಯನ್ನು ಪ್ರಾರಂಭ ಮಾಡುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

8. ಶ್ರೀ ಎಂ.ಟಿ. ಕೃಷ್ಣಪ್ಪ ಅವರು ರಾಜ್ಯದಲ್ಲಿ ಕೊಬ್ಬರಿಗೆ ಇರುವ ಬೆಂಬಲ ಬೆಲೆಯನ್ನು ಹೆಚ್ಚಿಸಲು ಹಾಗೂ ಕೊಬ್ಬರಿಗೆ ವಿಧಿಸಲಾಗಿರುವ ಮಾರಾಟ ತೆರಿಗೆಯನ್ನು ಕಡಿಮೆಗೊಳಿಸುವ ಬಗ್ಗೆ ಮಾನ್ಯ ಹಜ್ ಮತ್ತು ವಕ್ಫ್ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

9. ಶ್ರೀ ಎಸ್.ಆರ್. ಮಹೇಶ್ ಅವರು ಮೈಸೂರು ನಗರದಲ್ಲಿ ಶಿಕ್ಷಣ ಇಲಾಖೆಗೆ ಸೇರಿದ ಎಂ.ಟಿ.ಎಸ್. ಕನ್ನಡ ಶಾಲೆಯ ಜಾಗವನ್ನು ಖಾಸಗಿ ಆಶ್ರಮಕ್ಕೆ ನೀಡಿರುವುದರಿಂದ ಸ್ಥಳೀಯ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಹೊಳೆನರಸೀಪುರ ಪಟ್ಟಣ ಕಡವಿನ ಕೋಟೆ ಗ್ರಾಮದಲ್ಲಿ ಹೇಮಾವತಿ ನದಿಗೆ ಅಡ್ಡಲಾಗಿ ನಿರ್ಮಿಸುವ ಸೇತುವೆಗಾಗಿ ಹಾಗೂ ಹಾಗೂ ಹೊಳೆನರಸೀಪುರ ವರ್ತುಲ ರಸ್ತೆ ನಿರ್ಮಾಣಕ್ಕಾಗಿ ರೈತರಿಂದ ಭೂಮಿಯನ್ನು ಪಡೆದು ಆ ಸಂಬಂಧ ಭೂಸ್ವಾಧೀನ ದರ ನಿಗದಿಪಡಿಸುವಲ್ಲಿ ತಾರತಮ್ಯ ಮಾಡಿರುವುದರಿಂದ ಬ್ಯಾರೇಜ್ ನಿರ್ಮಾಣ ಕಾರ್ಯವು ಸ್ಥಗಿತವಾಗಿರುವ ಬಗ್ಗೆ ಹಾಗೂ ಭೂ ಪರಿಹಾರ ನೀಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್)ಯವರ ಗಮನ ಸೆಳೆಯುವುದು.

11. ಶ್ರೀಯುತರಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ್, ಹೆಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಎಸ್. ಪುಟ್ಟರಾಜು, ಹೆಚ್.ಎಸ್. ಪ್ರಕಾಶ್, ವೆಂಕಟರಾವ್ ನಾಡಗೌಡ ಮತ್ತು ಸುನೀಲ ವಿ ಹೆಗಡೆ ಅವರುಗಳು ಕರ್ನಾಟಕ ಹಾಲು ಮಹಾಮಂಡಳಿಯ ಪಶು ಆಹಾರ ಕಚ್ಚಾ ಸಾಮಾಗ್ರಿಯ (ಸಿ.ಎಸ್.ಡಿ.ಓ.ಸಿ) ಖರೀದಿಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಯುವಜನ ಸೇವಾ, ಕ್ರೀಡಾ ಮತ್ತು ಸಹಕಾರ ಸಚಿವರ ಗಮನ ಸೆಳೆಯುವುದು.

12. ಶ್ರೀ ಎಚ್. ಗೋಪಾಲ ಭಂಡಾರಿ ಅವರು ಚಾರಾ ಗ್ರಾಮ ಕಾರ್ಕಳ ತಾಲ್ಲೂಕು ಸರ್ವೆ ನಂಬರ್ 105ನ್ನು ಅರಣ್ಯ ಎಂದು ಅರಣ್ಯ ಇಲಾಖೆ ಮತ್ತು ವನ್ಯ ಜೀವಿ ಇಲಾಖೆ ಕಂದಾಯ ಇಲಾಖೆಗೆ ತಪ್ಪಾಗಿ ಪತ್ರ ಬರೆದು ಸಾವಿರಾರು ಕುಟುಂಬಕ್ಕೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್)ಯವರ ಗಮನ ಸೆಳೆಯುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಶ್ರೀಕಾಂತ ಕುಲಕರ್ಣಿ, ಡಾ|| ಸಾರ್ವಭೌಮ ಬಗಲಿ ಮತ್ತು ಶಿವರಾಜ್ ಎಸ್. ತಂಗಡಗಿ ಇವರುಗಳು ಮಹಾರಾಷ್ಟ್ರ ರಾಜ್ಯದಿಂದ ಕೃಷ್ಣ ಹಾಗೂ ಭೀಮಾ ನದಿಗಳಿಗೆ ನೀರನ್ನು ಬಿಡಿಸುವ ಕುರಿತು ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಡಾ|| ಸೌರ್ವಭೌಮ ಬಗಲಿ, ಎನ್. ಸಂಪಂಗಿ, ಶಿವರಾಜ್ ತಂಗಡಗಿ, ಗೂಳಹಟ್ಟಿ ಶೇಖರ್ ಹಾಗೂ ಇತರರು ರಾಜ್ಯದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯ ಕೊರತೆ ಮತ್ತು ಅಪೌಷ್ಟಿಕ ಆಹಾರ ಪೂರೈಕೆ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)